ಅ) ನ್ಯಾಷನಲ್ ಕೋಅಪರೇಟಿವ್ ಬ್ಯಾಂಕ್ ನಿ. ಬೆಂಗಳೂರು ಇದರಲ್ಲಿ 1985ರಿಂದ ಇಂದಿನವರೆಗೆ ಯಾವುದೇ ವಿಧವಾದ ಸಾಲವನ್ನು ಮನ್ನಾ ಮಾಡಿರುವುದಿಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಪರೀಕ್ಷೆಗೆ ಕುಳಿತ ವಿದ್ಯಾರ್ಥಿಗಳ ಸಂಖ್ಯೆ

3390 - ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್): ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜುಲೈ 1991ರಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ನಡೆಸಲಾದ ಕನ್ನಡ ಬೆರಳಚ್ಚು ಪ್ರಥಮ ದರ್ಜೆ, ಪ್ರೌಢ ದರ್ಜೆ ಹಾಗೂ ಪ್ರವೀಣ ದರ್ಜೆಗೆ ಕುಳಿತ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಆ) ಈ ಪೈಕಿ ಎಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ? (ದರ್ಜೆವಾರು ತಿಳಿಸಬೇಕು)

ಇ) ಕನ್ನಡ ಬೆರಳಚ್ಚು ಪ್ರೌಢ ದರ್ಜೆಯ ಪ್ರಥಮ ಪತ್ರಿಕೆಯ ಉತ್ತರ ಪತ್ರಿಕೆಗಳನ್ನು ಮನಸೋ ಇಚ್ಛೆ ಮೌಲ್ಯಮಾಪನ ಮಾಡಿರುವುದರಿಂದ, ಅಧಿಕ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಅನುತ್ತೀರ್ಣರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ಕನ್ನಡ ಬೆರಳಚ್ಚು ಪ್ರೌಢ ದರ್ಜೆಯ ಪ್ರಥಮ ಪತ್ರಿಕೆಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

ಊ) ವಿದ್ಯಾರ್ಥಿಗಳಿಗೆ ನ್ಯಾಯ ದೊರಕಿಸುವ ದೃಷ್ಟಿಯಲ್ಲಿ ಎಲ್ಲಾ ಕನ್ನಡ ಬೆರಳಚ್ಚು ಪ್ರೌಢ ದರ್ಜೆಯ ಪ್ರಥಮ ಪತ್ರಿಕೆಗಳನ್ನು ಮರುಮೌಲ್ಯಮಾಪನ ಮಾಡಿಸುವ ಬಗ್ಗೆ ಸರ್ಕಾರ ಇಚ್ಛಿಸುವುದೆ?

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು):

ಅ)

1) ಪ್ರಥಮ ದರ್ಜೆ	-12198
2) ಪ್ರೌಢದರ್ಜೆ	-8613
3) ಪ್ರವೀಣ ದರ್ಜೆ	- 49

ಆ)

1) ಪ್ರಥಮ ದರ್ಜೆ	- 7476
2) ಪ್ರೌಢ ದರ್ಜೆ	- 5133
3) ಪ್ರವೀಣ ದರ್ಜೆ	- ಇಲ್ಲ

ಇ) ಇಲ್ಲ

ಈ) 2176

ಊ) ಉದ್ಭವಿಸುವುದಿಲ್ಲ.

Management of Junior College Bethamangala,

3336 - SRI. NARAYANASWAMY (Bethamangala): Will the Minister for Education and Parliamentary Affairs pleased to stage.